ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಜಂಟಿ ನಿರ್ದೇಶಕರು (ನಗರ ಯೋಜನೆ – ಉತ್ತರ) ರವರ ಕಛೇರಿ, ಎನ್.ಆರ್.ಚೌಕ, ಬೆಂಗಳೂರು – 560 002.**

ಸಂಖ್ಯೆ: BBMP/Addl.Dir/JD NORTH/0599/2012-13 ದಿನಾಂಕ: 17-10-2015

CC 60/2015-16 17/10/15

## ಪ್ರಾರಂಭಿಕ ಪ್ರಮಾಣಪತ್ರ

ವಿಷಯ: ಆಸ್ತಿ ಸಂಖ್ಯೆ: 12, ಸರ್ವೆ ನಂ. 21, ಕೆ.ನಾರಾಯಣಪುರ ಗ್ರಾಮ, ಕೆ.ಆರ್.ಪುರಂ ಹೋಬಳಿ, ಬೆಂಗಳೂರು ಪೂರ್ವ ತಾಲ್ಲೂಕು, ವಾರ್ಡ್ ನಂ.25, ಬೆಂಗಳೂರು, ಸದರಿ ಸ್ವತ್ತಿನಲ್ಲಿ ನಿರ್ಮಿಸುತ್ತಿರುವ ವಸತಿ ಸಮುಚ್ಚಯ ಕಟ್ಟಡಕ್ಕೆ ಪರಿಷ್ಕೃತ ನಕ್ಷೆ ಮಂಜೂರಾತಿಯೊಂದಿಗೆ ಪ್ರಾರಂಭಿಕ ಪ್ರಮಾಣಪತ್ರ ನೀಡುವ ಬಗ್ಗೆ.

ಉಲ್ಲೇಖ: 1) ನಕ್ಷೆ ಮಂಜೂರಾತಿ ಸಂಖ್ಯೆ: BBMP/ Addl.Dir/ JD North/ LP/ 0599/ 2012-13, ದಿನಾಂಕ: 11-06-2013

2) ತಮ್ಮ ಮನವಿ ಪತ್ರ ದಿನಾಂಕ: 08-06-2015.

* * * * * * *

12, ಸರ್ವೆ ನಂ. 21, ಕೆ.ನಾರಾಯಣಪುರ ಗ್ರಾಮ, ಕೆ.ಆರ್.ಪುರಂ ಹೋಬಳಿ, ಬೆಂಗಳೂರು ಪೂರ್ವ ತಾಲ್ಲೂಕು, ವಾರ್ಡ್ ನಂ.25, ಬೆಂಗಳೂರು ಇಲ್ಲಿರುವ ಸ್ವತ್ತಿನಲ್ಲಿ ನಿರ್ಮಿಸುತ್ತಿರುವ ನೆಲ + ಮೇಲಿನ 14 ಅಂತಸ್ತುಗಳ 225 ಘಟಕಗಳುಳ್ಳ ವಸತಿ ಸಮುಚ್ಚಯ ಕಟ್ಟಡ ನಿರ್ಮಿಸಲು ಉಲ್ಲೇಖ (1) ರಂತೆ ಈ ಕಛೇರಿಯಿಂದ ದಿನಾಂಕ: 11-06-2013 ರಂದು ನಕ್ಷೆ ಮಂಜೂರಾತಿಯನ್ನು ನೀಡಲಾಗಿರುತ್ತದೆ. ಸದರಿ ವಸತಿ ಸಮುಚ್ಚಯ ಕಟ್ಟಡಕ್ಕೆ ಉಲ್ಲೇಖ (2) ರಲ್ಲಿ ಪರಿಷ್ಕೃತ ನಕ್ಷೆ ಮಂಜೂರಾತಿಯೊಂದಿಗೆ ಪ್ರಾರಂಭಿಕ ಪ್ರಮಾಣಪತ್ರ ನೀಡಲು ಕೋರಿರುವುದಕ್ಕೆ ಸಂಬಂಧಿಸಿದಂತೆ, ಕಟ್ಟಡ ನಿರ್ಮಾಣದ ಸ್ಥಳವನ್ನು ಪರಿಶೀಲಿಸಲಾಗಿ, ಮಂಜೂರಾತಿ ನಕ್ಷೆಯನ್ವಯ ಕಟ್ಟಡ ನಿರ್ಮಾಣ ಪ್ರಾರಂಭಿಸಿದ್ದು, ಆರ್.ಸಿ.ಸಿ. ಸ್ಥಂಭಗಳನ್ನು ನಿರ್ಮಿಸಲಾಗಿರುತ್ತದೆ.

ಮಾನ್ಯ ಆಯುಕ್ತರು ರವರು ಪರಿಷ್ಕೃತ ನಕ್ಷೆ ಮಂಜೂರಾತಿಯೊಂದಿಗೆ ಪ್ರಾರಂಭಿಕ ಪ್ರಮಾಣಪತ್ರ ನೀಡುವ ಪ್ರಸ್ತಾವನೆಗೆ ದಿನಾಂಕ: 19-08-2015 ರಂದು ಅನುಮೋದನೆ ನೀಡಿರುತ್ತಾರೆ. ಸದರಿ ಕಟ್ಟಡಕ್ಕೆ ಪ್ರಾರಂಭಿಕ ಪ್ರಮಾಣಪತ್ರದ ಶುಲ್ಕ ರೂ. 1.87.824/- ಮತ್ತು ಪ್ರಾರಂಭಿಕ ಪ್ರಮಾಣಪತ್ರ ಪಡೆಯದೇ ಕಟ್ಟಡದ ಕಾಮಗಾರಿಯನ್ನು ನಿರ್ವಹಿಸಿರುವ ಭಾಗಕ್ಕೆ ದಂಡ ಶುಲ್ಕ ರೂ. 16,03,786/- ಗಳೊಂದಿಗೆ ಒಟ್ಟು ರೂ. 17,91,610/- ಗಳಿಗೆ ಡಿ.ಡಿಯನ್ನು ಸಲ್ಲಿಸಿ ಈ ಕಛೇರಿಯ ರಶೀದಿ ಸಂಖ್ಯೆ: TP/JDTPNRT/01/2015-16/Sep./0007 ದಿನಾಂಕ: 03-09-2015 ಮತ್ತು RE-ifms331-TP/000007 ದಿನಾಂಕ: 07-10-2015 ರಂದು ಸಂದಾಯ ಮಾಡಿರುವುದರಿಂದ, ಸದರಿ ವಸತಿ ಸಮುಚ್ಚಯ ಕಟ್ಟಡಕ್ಕೆ ಈ ಕೆಳಕಂಡ ಷರತ್ತುಗಳಿಗೆ ಒಳಪಡಿಸಿ ಪ್ರಾರಂಭಿಕ ಪ್ರಮಾಣಪತ್ರವನ್ನು ನೀಡಲಾಗಿದೆ.

1. ಕಟ್ಟಡದ ಕಾಮಗಾರಿಯನ್ನು ಮಂಜೂರಾತಿ ನಕ್ಷೆಯಂತೆ ನಿಯಮಾನುಸಾರ ನಿರ್ಮಿಸತಕ್ಕದ್ದು.
2. ಕಟ್ಟಡ ನಿರ್ಮಾಣದ ಸ್ಥಳದಲ್ಲಿ ಅಕ್ಕ-ಪಕ್ಕದವರಿಗೆ ಯಾವುದೇ ರೀತಿಯ ತೊಂದರೆಯಾಗದಂತೆ, ವಾಹನ ಸಂಚಾರಕ್ಕೆ ಅಡಚಣೆಯಾಗದಂತೆ, ಅಪಘಾತ ಆಗದಂತೆ ಕಟ್ಟಡ ನಿರ್ಮಾಣ ಕೈಗೊಳ್ಳುವುದು ಹಾಗೂ ಕೆಲಸಗಾರರಿಗಾಗಿ ಶೆಡ್ ಮತ್ತು ತಾತ್ಕಾಲಿಕ ಶೌಚಾಲಯಗಳನ್ನು ನಿರ್ಮಿಸತಕ್ಕದ್ದು.
3. ಕಟ್ಟಡ ನಿರ್ಮಾಣದ ಪ್ರಗತಿಯನ್ನು ಕಾಲಾನುಸಾರ ಸಂಬಂಧಪಟ್ಟ ಇಂಜಿನಿಯರಿಂಗ್ ಉಪ-ವಿಭಾಗಕ್ಕೆ ಮಾಹಿತಿಯನ್ನು ನೀಡಿ ಮಂಜೂರಾತಿ ನಕ್ಷೆಯಂತೆ ನಿರ್ಮಿಸುತ್ತಿರುವ ಬಗ್ಗೆ ಪರಿವೀಕ್ಷಣೆಗೆ ಒಳಪಡಿಸತಕ್ಕದ್ದು.
4. ಉದ್ಯಾನವನ ಹಾಗೂ ಬಯಲು ಜಾಗಕ್ಕೆ ಸ್ಥಳ ಕಾಯ್ದಿರಿಸಿದೇ ಇರುವುದರಿಂದ, ಅಷ್ಟೇ ವಿಸ್ತೀರ್ಣದ ಮಾರುಕಟ್ಟೆ ಬೆಲೆ ರೂ. 1,22,89,400/- ಗಳನ್ನು ಪಾಲಿಕೆಗೆ ಪಾವತಿಸುವ ಸಂಬಂಧ ಘನ ಉಚ್ಚ ನ್ಯಾಯಾಲಯದಲ್ಲಿನ ರಿಟ್ ಅರ್ಜಿ ಸಂಖ್ಯೆ: 37964/2015 (ಎಲ್‌ಬಿ-ಬಿಎಂಪಿ) ಗೆ ದಿನಾಂಕ:08-09-2015 ರಂದು ತಡೆಯಾಜ್ಞೆ ನೀಡಿರುವುದರಿಂದ, ನ್ಯಾಯಾಲಯದ ಅಂತಿಮ ತೀರ್ಪಿಗೆ ಬದ್ಧರಾಗಿರತಕ್ಕದ್ದು.

17/10/15

ಜಂಟಿ ನಿರ್ದೇಶಕರು (ನಗರ ಯೋಜನೆ – ಉತ್ತರ)
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

17/10 17/10/15 17/10/15

ಗೆ,

ಶ್ರೀ. ಅಬ್ರಾಹಿಂ ನೈನಾನ್ ಮತ್ತು ಬಿನ್ ಎನ್.ನೈನಾನ್
\# 12, ಸರ್ವೆ ನಂ. 21, ಕೆ.ನಾರಾಯಣಪುರ ಗ್ರಾಮ,
ಕೆ.ಆರ್.ಪುರಂ ಹೋಬಳಿ, ಬೆಂಗಳೂರು ಪೂರ್ವ ತಾಲ್ಲೂಕು,
ವಾರ್ಡ್ ನಂ.25, ಬೆಂಗಳೂರು,